# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2013–14ನೇ ಸಾಲಿನ 'ಕರ್ನಾಟಕ ರಾಜ್ಯ ಪರಿಸರ ಪ್ರಶಸ್ತಿ' ನೀಡಲು ಆಯ್ಕೆ ಸಮಿತಿ ರಚಿಸುವ ಕುರಿತು.

****

**ಪ್ರಸ್ತಾವನೆ:**

ಕರ್ನಾಟಕ ಸರ್ಕಾರದ ವತಿಯಿಂದ **ವಿಶ್ವ ಪರಿಸರ ದಿನಾಚರಣೆ**ಯಂದು ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯ ವತಿಯಿಂದ ಪ್ರತಿ ವರ್ಷ ಪರಿಸರ ಸಂರಕ್ಷಣೆ ಮತ್ತು ವ್ಯವಸ್ಥಾಪನೆ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ವ್ಯಕ್ತಿ ಹಾಗೂ ಸಂಸ್ಥೆ (ಸರ್ಕಾರಿ/ಸರ್ಕಾರೇತರ, ಕಂಪನಿಗಳು, ಟ್ರಸ್ಟ್‌ಗಳು ಹಾಗೂ ಇತರೆ) ಗಳಿಗೆ ತಲಾ ಒಂದು ಲಕ್ಷ ನಗದು ಹಾಗೂ ಪ್ರಶಸ್ತಿ ಪ್ರಮಾಣ ಪತ್ರವನ್ನೊಳಗೊಂಡ **ರಾಜ್ಯ ಪರಿಸರ ಪ್ರಶಸ್ತಿ** ನೀಡಲಾಗುತ್ತದೆ. ಅದೇ ರೀತಿಯಾಗಿ 2013–14ನೇ ಸಾಲಿನ ಕರ್ನಾಟಕ ರಾಜ್ಯದ ಪರಿಸರ ಪ್ರಶಸ್ತಿಗಾಗಿ ಅರ್ಹ ವ್ಯಕ್ತಿ ಹಾಗೂ ಸಂಸ್ಥೆಗಳಿಂದ ಅರ್ಜಿ/ನಾಮನಿರ್ದೇಶನಗಳನ್ನು ಆಹ್ವಾನಿಸಲಾಗಿದೆ. ಈ ಪ್ರಶಸ್ತಿಗಳನ್ನು **ರಾಜ್ಯದ ಮಲೆನಾಡು/ಕರಾವಳಿ ವಲಯ** (ಬೆಳಗಾವಿ, ಶಿವಮೊಗ್ಗ, ಚಿಕ್ಕಮಗಳೂರು, ಮೈಸೂರು, ಕೊಡಗು, ಚಾಮರಾಜನಗರ, ಹಾಸನ, ದಕ್ಷಿಣ ಕನ್ನಡ ಜಿಲ್ಲೆ, ಉತ್ತರ ಕನ್ನಡ ಜಿಲ್ಲೆ ಮತ್ತು ಉಡುಪಿ ಜಿಲ್ಲೆಗಳು), **ದಕ್ಷಿಣ ವಲಯ** (ಮಂಡ್ಯ, ರಾಮನಗರ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕೋಲಾರ, ಚಿಕ್ಕಬಳ್ಳಾಪುರ ಮತ್ತು ತುಮಕೂರು ಜಿಲ್ಲೆಗಳು) ಮತ್ತು **ಉತ್ತರ ವಲಯ** (ದಾವಣಗೆರೆ, ಚಿತ್ರದುರ್ಗ, ಹಾವೇರಿ, ಧಾರವಾಡ, ಗದಗ್, ಬಳ್ಳಾರಿ, ಬಾಗಲಕೋಟೆ, ಬಿಜಾಪುರ, ಬೀದರ್, ಗುಲ್ಬರ್ಗ, ರಾಯಚೂರು, ಯಾದಗಿರಿ ಮತ್ತು ಕೊಪ್ಪಳ ಜಿಲ್ಲೆಗಳು) ಎಂದು ಮೂರು ವಲಯಗಳಾಗಿ ವಿಂಗಡಿಸಲಾಗಿದ್ದು, ಈ ವಲಯಗಳಲ್ಲಿನ ತಲಾ ಒಬ್ಬ ವ್ಯಕ್ತಿ ಮತ್ತು ಒಂದು ಸಂಸ್ಥೆಯನ್ನು ಪ್ರಶಸ್ತಿಗೆ ಪರಿಗಣಿಸಲಾಗುವುದು.

ಸರ್ಕಾರದ ಪ್ರಕಟಣೆಯಂತೆ ಸ್ವೀಕೃತವಾಗುವ ಅರ್ಜಿ/ನಾಮನಿರ್ದೇಶನಗಳನ್ನು ನಿಯಮಾನುಸಾರ ಕೂಲಂಕುಷವಾಗಿ ಪರಿಶೀಲಿಸಿ ಪರಿಸರ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿರುವ ಮೇಲ್ಕಂಡ ವಲಯಗಳ ಒಬ್ಬ ವ್ಯಕ್ತಿ ಮತ್ತು ಒಂದು ಸಂಸ್ಥೆಯನ್ನು ಗುರುತಿಸಿ, ಪ್ರಶಸ್ತಿಗಾಗಿ ಸರ್ಕಾರಕ್ಕೆ ಶಿಫಾರಸ್ಸು ಮಾಡಲು ಈ ಕೆಳಕಂಡ ಸದಸ್ಯರನ್ನು ಒಳಗೊಂಡ ಸಮಿತಿಯನ್ನು ರಚಿಸಲು ಉದ್ದೇಶಿಸಲಾಗಿದೆ.

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ – ಅಧ್ಯಕ್ಷರು

2) ಸರ್ಕಾರದ ಕಾರ್ಯದರ್ಶಿ
(ಪರಿಸರ ಮತ್ತು ಜೀವಿಶಾಸ್ತ್ರ)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ – ಸದಸ್ಯರು

3) ಸರ್ಕಾರದ ಕಾರ್ಯದರ್ಶಿ (ಅರಣ್ಯ)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ – ಸದಸ್ಯರು

. . .2

4) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಮುಖ್ಯಸ್ಥರು ಅರಣ್ಯ ಪಡೆ), ಬೆಂಗಳೂರು. – ಸದಸ್ಯರು

5) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ವನ್ಯಜೀವಿ), ಬೆಂಗಳೂರು. – ಸದಸ್ಯರು

6) ಅಧ್ಯಕ್ಷರು,
ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ – ಸದಸ್ಯರು

7) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ
ಕೆರೆ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು. – ಸದಸ್ಯರು

8) ಸದಸ್ಯ ಕಾರ್ಯದರ್ಶಿ
ಕರ್ನಾಟಕ ಜೀವ ವೈವಿಧ್ಯ ಮಂಡಳಿ, ಬೆಂಗಳೂರು. – ಸದಸ್ಯರು

9) ಮಹಾ ನಿರ್ದೇಶಕರು, ಪರಿಸರ ನಿರ್ವಹಣೆ ಮತ್ತು
ನೀತಿ ಸಂಶೋಧನಾ ಸಂಸ್ಥೆ, ಬೆಂಗಳೂರು – ಸದಸ್ಯರು.

10) ಸರ್ಕಾರದ ಅಧೀನ ಕಾರ್ಯದರ್ಶಿ (ಪರಿಸರ)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ. – ಸದಸ್ಯ ಕಾರ್ಯದರ್ಶಿ

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಅಪಜೀ 16 ಇಎನ್‌ಜಿ 2014**
**ಬೆಂಗಳೂರು, ದಿನಾಂಕ: 09.04.2014**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಪರಿಸರ ಸಂರಕ್ಷಣೆ ಮತ್ತು ವ್ಯವಸ್ಥಾಪನಾ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ವ್ಯಕ್ತಿ/ಸಂಸ್ಥೆಗಳಿಗೆ ಕರ್ನಾಟಕ ಸರ್ಕಾರವು ವಿಶ್ವ ಪರಿಸರ ದಿನಾಚರಣೆಯಂದು ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯ ವತಿಯಿಂದ ನೀಡಲಾಗುವ 2013-14ನೇ ಸಾಲಿನ ರಾಜ್ಯ ಪರಿಸರ ಪ್ರಶಸ್ತಿಗಳನ್ನು ನೀಡುವ ಸಲುವಾಗಿ ಅರ್ಹ ವ್ಯಕ್ತಿ/ಸಂಸ್ಥೆಗಳಿಂದ ಸ್ವೀಕರಿಸಲಾದ ಅರ್ಜಿ/ನಾಮನಿರ್ದೇಶನಗಳನ್ನು ನಿಯಮಾನುಸಾರ ಪರಿಶೀಲಿಸಿ ಪ್ರಶಸ್ತಿಗಾಗಿ ಸರ್ಕಾರಕ್ಕೆ ಸಂಭಾವ್ಯ ಪುರಸ್ಕೃತರ ಹೆಸರನ್ನು ಶಿಫಾರಸ್ಸು ಮಾಡಲು ಈ ಕೆಳಕಂಡ ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ.

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ – ಅಧ್ಯಕ್ಷರು

2) ಸರ್ಕಾರದ ಕಾರ್ಯದರ್ಶಿ
(ಪರಿಸರ ಮತ್ತು ಜೀವಿಶಾಸ್ತ್ರ)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ – ಸದಸ್ಯರು

3) ಸರ್ಕಾರದ ಕಾರ್ಯದರ್ಶಿ (ಅರಣ್ಯ)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ – ಸದಸ್ಯರು

4) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮುಖ್ಯಸ್ಥರು ಅರಣ್ಯ ಪಡೆ), ಬೆಂಗಳೂರು. – ಸದಸ್ಯರು

5) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ), ಬೆಂಗಳೂರು. – ಸದಸ್ಯರು

6) ಅಧ್ಯಕ್ಷರು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ – ಸದಸ್ಯರು

7) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆರೆ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು. – ಸದಸ್ಯರು

8) ಸದಸ್ಯ ಕಾರ್ಯದರ್ಶಿ ಕರ್ನಾಟಕ ಜೀವ ವೈವಿಧ್ಯ ಮಂಡಳಿ, ಬೆಂಗಳೂರು. – ಸದಸ್ಯರು

9) ಮಹಾ ನಿರ್ದೇಶಕರು, ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆ, ಬೆಂಗಳೂರು – ಸದಸ್ಯರು.

10) ಸರ್ಕಾರದ ಅಧೀನ ಕಾರ್ಯದರ್ಶಿ (ಪರಿಸರ) ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ – ಸದಸ್ಯ ಕಾರ್ಯದರ್ಶಿ

ಈ ಸಮಿತಿಯು ಪ್ರಸಕ್ತ ಸಾಲಿಗೆ ಮಾತ್ರ ಅನ್ವಯವಾಗಿದ್ದು, ತನ್ನ ಶಿಫಾರಸ್ಸುಗಳನ್ನು ಮೇ–2014ರ ತಿಂಗಳ ಅಂತ್ಯದ ಒಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ,

ಜಿ. ಹೆಚ್. ಅನಸೂಯಮ್ಮ 29/4/14
(ಜಿ.ಹೆಚ್.ಅನಸೂಯಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
(ಪರಿಸರ ಮತ್ತು ಜೀವಿಶಾಸ್ತ್ರ)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.

**ಗೆ :**

*ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ* ಹಾಗೂ ಪ್ರಕಟಿತ 50 ಪ್ರತಿಗಳನ್ನು ಇಲಾಖೆಗೆ ಒದಗಿಸಲು ಕೋರಿದೆ.

**ಪ್ರತಿ:**

1) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮುಖ್ಯಸ್ಥರು ಅರಣ್ಯ ಪಡೆ) ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು–560 003.
2) ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು–560 003.
3) ಅಧ್ಯಕ್ಷರು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ನಂ.49, ಪರಿಸರ ಭವನ, ಚರ್ಚ್ ಸ್ಟ್ರೀಟ್, ಬೆಂಗಳೂರು – 1.

4) ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ನಂ.49, ಪರಿಸರ ಭವನ, ಚರ್ಚ್ ಸ್ಟ್ರೀಟ್, ಬೆಂಗಳೂರು - 1.
5) ಸದಸ್ಯ ಕಾರ್ಯದರ್ಶಿ, ಕರ್ನಾಟಕ ಜೀವ ವೈವಿಧ್ಯ ಮಂಡಳಿ, ನೆಲಮಹಡಿ, ವನವಿಕಾಸ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು - 3.
6) ಮುಖ್ಯ ಕಾರ್ಯ ನಿರ್ವಹಣಾಧಿಕಾರಿ, ಕೆರೆ ಅಭಿವೃದ್ಧಿ ಪ್ರಾಧಿಕಾರ, ನಂ.49, ಪರಿಸರ ಭವನ, ಚರ್ಚ್ ಸ್ಟ್ರೀಟ್, ಬೆಂಗಳೂರು.
7) ಮಹಾ ನಿರ್ದೇಶಕರು, ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆ, (EMPRI) ಹಸಿರು ಭವನ, ದೊರೆಸಾನಿಪಾಳ್ಯ ಫಾರೆಸ್ಟ್ ಕ್ಯಾಂಪಸ್, ವಿನಾಯಕನಗರ ಸರ್ಕಲ್, ಜೆ.ಪಿ.ನಗರ, 5ನೇ ಹಂತ, ಬೆಂಗಳೂರು-76.
8) ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.
9) ಸಮಿತಿಯ ಅಧ್ಯಕ್ಷರು/ಎಲ್ಲಾ ಸದಸ್ಯರು/ ಸದಸ್ಯ ಕಾರ್ಯದರ್ಶಿಗಳು.
10) ಸಂಬಂಧಿಸಿದ ಅಧಿಕಾರಿಗಳಿಗೆ.
11) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

ಪ್ರತಿಯನ್ನು :-

1) ಸನ್ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಯವರಿಗೆ, ಮುಖ್ಯ ಮಂತ್ರಿಗಳ ಆದ್ಯ ಗಮನಕ್ಕೆ ತರುವ ಸಲುವಾಗಿ.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ಸರ್ಕಾರದ ಕಾರ್ಯದರ್ಶಿಗಳು (ಅರಣ್ಯ) ಇವರ ಪತ್ರಾಂಕಿತ ಆಪ್ತ ಸಹಾಯಕರು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು.
4) ಸರ್ಕಾರದ ಕಾರ್ಯದರ್ಶಿಗಳು (ಪರಿಸರ ಮತ್ತು ಜೀವಿಶಾಸ್ತ್ರ) ಇವರ ಪತ್ರಾಂಕಿತ ಆಪ್ತ ಸಹಾಯಕರು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5) ಸರ್ಕಾರದ ಅಧೀನ ಕಾರ್ಯದರ್ಶಿ (ಪರಿಸರ) ಇವರ ಆಪ್ತ ಸಹಾಯಕರು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.